## ಜೆಎಸ್‌ಎಸ್ ಮಹಾವಿದ್ಯಾಪೀಠ
## ಜಗದ್ಗುರು ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಜ್ಞಾನವಾರಿಧಿ–54

### ಡಿಜಿಟಲ್ ಸಾಪ್ತಾಹಿಕ ಉಪನ್ಯಾಸ ಕಾರ್ಯಕ್ರಮ

**13 ಡಿಸೆಂಬರ್ 2021 * ಸೋಮವಾರ * ಸಂಜೆ 6.00**

**ದಿವ್ಯ ಸಾನ್ನಿಧ್ಯ**

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ

ಸುತ್ತೂರು ಶ್ರೀಕ್ಷೇತ್ರ

**ಉಪನ್ಯಾಸ**



**ಡಾ. ಶ್ರೀ ಶಿವಾನಂದ ಶಿವಾಚಾರ್ಯ ಸ್ವಾಮಿಗಳು**

ಸುಕ್ಷೇತ್ರ ಶ್ರೀ ಹಿರೇಮಠ

ತುಮಕೂರು

**ವಿಷಯ : ಸಂಸ್ಕೃತ ಸುಭಾಷಿತಗಳಲ್ಲಿ ವಿಧಿ–ನಿಷೇಧಗಳು**

(ಉಪನ್ಯಾಸದ ನಂತರ ಆನ್‌ಲೈನ್‌ನಲ್ಲಿ ಬರುವ ಪ್ರಶ್ನೆಗಳಲ್ಲಿ ಆಯ್ದವುಗಳಿಗೆ ಉತ್ತರಿಸಲಾಗುವುದು)

LIVE STREAMING

**ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ**

YouTube http://Youtube.com/c/JSSMahavidyapeethaonline

https://www.facebook.com/JSSMVP

**ಜ್ಞಾನವಾರಿಧಿ** ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮವನ್ನು 2020ರ ಡಿಸೆಂಬರ್ ತಿಂಗಳಿನಿಂದ ಪ್ರತಿ ಸೋಮವಾರ ಏರ್ಪಡಿಸಿಕೊಂಡು ಬರಲಾಗುತ್ತಿದೆ. ಧರ್ಮ, ಅಧ್ಯಾತ್ಮ, ಯೋಗ, ಕಲೆ, ಸಾಹಿತ್ಯ, ಸಂಸ್ಕೃತಿ, ಆರೋಗ್ಯ, ಜೀವನಶೈಲಿ, ವಿಜ್ಞಾನ, ತಂತ್ರಜ್ಞಾನ ಮುಂತಾದ ವಿಷಯಗಳು ಮತ್ತು ಪ್ರಚಲಿತ ವಿದ್ಯಮಾನಗಳನ್ನು ಕುರಿತು ದೇಶ ಮತ್ತು ವಿದೇಶದ ವಿವಿಧ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ.

**ಡಾ. ಶ್ರೀ ಶಿವಾನಂದ ಶಿವಾಚಾರ್ಯ ಸ್ವಾಮಿಗಳು** ತುಮಕೂರು ಶ್ರೀ ಹಿರೇಮಠದ ಅಧ್ಯಕ್ಷರು. ಪ್ರಾಥಮಿಕ ಶಿಕ್ಷಣದಿಂದ ಸ್ನಾತಕ ಶಿಕ್ಷಣವನ್ನು ವಿಜಯಪುರದಲ್ಲಿ ಪೂರೈಸಿದರು. ಕರ್ನಾಟಕ ವಿಶ್ವವಿದ್ಯಾಲಯದಿಂದ ಸಂಸ್ಕೃತದಲ್ಲಿ ಚಿನ್ನದ ಪದಕಗಳೊಂದಿಗೆ ಸ್ನಾತಕೋತ್ತರ ಹಾಗೂ ಪಿಎಚ್‌ಡಿ ಪದವಿ, ಕಾಶಿಯ ಶ್ರೀ ಸಂಪೂರ್ಣಾನಂದ ವಿಶ್ವವಿದ್ಯಾಲಯದಿಂದ ಶಕ್ತಿವಿಶಿಷ್ಟಾದ್ವೈತ ವೇದಾಂತದಲ್ಲಿ ವೇದಾಂತಚಾರ್ಯ ಪದವಿ, ಬನಾರಸ್ ವಿಶ್ವವಿದ್ಯಾಲಯದಿಂದ ಎಲ್‌ಎಲ್‌ಬಿ ಪದವಿಯನ್ನು ಪಡೆದರು.

ಶ್ರೀಮಠದ ಸಮಗ್ರ ಮತ್ತು ಸರ್ವಾಂಗೀಣ ಅಭಿವೃದ್ಧಿಯೊಂದಿಗೆ ಕಾರ್ಯಕ್ಷೇತ್ರವನ್ನು ವಿಸ್ತಾರಗೊಳಿಸುತ್ತಿದ್ದಾರೆ. ಉತ್ತಮ ವಾಗ್ಮಿಗಳು ಹಾಗೂ ಬರಹಗಾರರು. ಸಾಹಿತ್ಯದಲ್ಲಿ ಅಪಾರ ಆಸಕ್ತಿಯನ್ನು ಹೊಂದಿದ್ದಾರೆ. ವಿಚಾರವೃಷ್ಟಿ, ಮುತ್ತಾದ ಮಾತು, ವಿಚಾರ ಮಾನಸ, ಶಿವಾನಂದ ಉವಾಚ, ಆತ್ಮಜ್ಯೋತಿ ಅರಳಿ ನೀತಿ ಸೇರಿದಂತೆ 20ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದಾರೆ. ನಾಡಿನ ಪ್ರಮುಖ ದಿನಪತ್ರಿಕೆಗಳಲ್ಲಿ ಇವರ ಅಂಕಣಗಳು ಪ್ರಕಟವಾಗುತ್ತಿವೆ. ಶ್ರೀಗಳು ರಚಿಸುವ ಸೂಕ್ತಿಗಳು ಹೆಚ್ಚು ಜನಪ್ರಿಯಗೊಂಡಿವೆ. ಹಿರೇಮಠ ವಿದ್ಯಾಸಂಸ್ಥೆಯನ್ನು ಸ್ಥಾಪಿಸಿ ಶೈಕ್ಷಣಿಕ ಕ್ಷೇತ್ರದಲ್ಲೂ ಸಾಕಷ್ಟು ಬದಲಾವಣೆಗಾಗಿ ಶ್ರಮಿಸುತ್ತಿದ್ದಾರೆ. ಮಕ್ಕಳಿಗೆ ಬೇಸಿಗೆ ಶಿಬಿರ, ಮಹಿಳೆಯರಿಗೆ ರುದ್ರಾಧ್ಯಯನ ಹಾಗೂ ವೇದ ಶಿಬಿರಗಳು, ಸರ್ವಧರ್ಮಗಳ ಸಮನ್ವಯತೆಗಾಗಿ ವಿಚಾರ ವಂದನಾ ಶಿಬಿರಗಳನ್ನು ಏರ್ಪಡಿಸುತ್ತಿದ್ದಾರೆ. ಅಮೆರಿಕ, ಇಂಗ್ಲೆಂಡ್, ಆಸ್ಟ್ರೇಲಿಯ ಸೇರಿದಂತೆ ವಿವಿಧ ದೇಶಗಳಲ್ಲಿ ಭಾರತೀಯ ಧರ್ಮ ಮತ್ತು ಸಂಸ್ಕೃತಿಗಳ ಬಗ್ಗೆ ಉಪನ್ಯಾಸಗಳನ್ನು ನೀಡಿದ್ದಾರೆ. ಗ್ರಾಮಾಂತರ ಪ್ರದೇಶಗಳಿಗೆ ಭೇಟಿ ನೀಡಿ ಅಲ್ಲಿನ ಜನರು, ರೈತರು ಹಾಗೂ ಯುವಕರಲ್ಲಿ ಪ್ರಜ್ಞಾವಂತಿಕೆಯನ್ನು ಮೂಡಿಸುತ್ತಿದ್ದಾರೆ.

**ಜ್ಞಾನವಾರಿಧಿ–55 * 20 ಡಿಸೆಂಬರ್ 2021**

**ಕರ್ನಲ್ ಶ್ರೀ ಬಿ.ಎಸ್. ಚೇತನ್**

ನಿವೃತ್ತ ಸೇನಾಧಿಕಾರಿಗಳು
ಮೈಸೂರು

ವಿಷಯ : ಜೀವನದಲ್ಲಿ ಅತ್ಯುತ್ತಮ ಸಾಧನೆಯ ಸಿದ್ಧತೆ

**ಜ್ಞಾನವಾರಿಧಿ–56 * 27 ಡಿಸೆಂಬರ್ 2021**

**ಡಾ. ಶುಭಾ ಮರವಂತೆ**

ಸಹ ಪ್ರಾಧ್ಯಾಪಕರು
ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಶಿವಮೊಗ್ಗ

ವಿಷಯ : ವಚನಕಾರ್ತಿಯರ ಜೀವನ ಧರ್ಮ